ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ, ಕುಂದಾಪುರ

ಸಿ.ಸಿ. ನಂಬ್ರ:1221/2016

ಚಾಸಾ:7 ಪ್ರಾಸಾ:4

ದಿನಾಂಕ: 11.08.2025

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ದಿನೇಶ್ ಕಾಮತ್ |
| ತಂದೆಯ ಹೆಸರು | : | ಗಣಪತಿ ಕಾಮತ್ |
| ವಯಸ್ಸು | : | 55 ವರ್ಷ |
| ಉದ್ಯೋಗ | : | ಅಟೋ ಚಾಲಕ |
| ವಾಸ ಸ್ಥಳ | : | ಕೆದೂರು |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ:**

ಆರೋಪಿತರ ಪರಿಚಯವಿದೆ. ನಾನು ಆರೋಪಿತರ ಮತ್ತು ಚಾಸಾ-1ರವರ ನಡುವಿನ ಗಲಾಟೆಯನ್ನು ನೋಡಿಲ್ಲ. ನಾನು ಪೊಲೀಸರಿಗೆ ಯಾವುದೇ ಹೇಳಿಕೆ ನೀಡಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಗೆ ವಿರುದ್ದವಾಗಿ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸ.ಸ.ಅ.ರವರು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

**ಪಾಟೀ ಸವಾಲು: ಮಾನ್ಯ ಸ.ಸ.ಅ.ರವರಿಂದ:**

ದಿ: 19-11-2015ರಂದು ಚಾಸಾ-2ರವರು ಒಂದು ಪ್ರಕರಣಕ್ಕೆ ಸಂಬಂಧಿಸಿದ ಆರೋಪಿಯಾದ 1ನೇ ಆರೋಪಿಯನ್ನು ಚಾಸಾ-3ರವರ ಅಟೋದಲ್ಲಿ ದಸ್ತಗಿರಿ ಮಾಡಿ ಕರೆದುಕೊಂಡು ಹೋಗುತ್ತಿದ್ದಾಗ ಆರೋಪಿತರೆಲ್ಲರೂ ಏಕಾಏಕಿ ಚಾಸಾ-3ರವರ ಅಟೋವನ್ನು ಅಡ್ಡಗಟ್ಟಿ ಅಟೋವನ್ನು ಪಲ್ಟಿ ಮಾಡಲು ಪ್ರಯತ್ನಿಸಿ ಉಳಿದ ಆರೋಪಿತರು ಚಾಸಾ-1ರವರಿಗೆ ಹೊಡೆದು ಬೈದು ಅವರ ಸಮವಸ್ತ್ರವನ್ನು ಹರಿದು ಹಾಕಿರುತ್ತಾರೆ ಎಂದರೆ ಸರಿಯಲ್ಲ. ಅನಂತರ ಕೊಲ್ಲುವುದಾಗಿ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ. ಇದರಿಂದ ಚಾಸಾ-3ರವರ ರಿಕ್ಷಾ ಜಖಂಗೊಂಡಿರುತ್ತದೆ ಎಂದರೆ ಸರಿಯಲ್ಲ.

ಈ ಎಲ್ಲಾ ವಿಚಾರವಾಗಿ ನಾನು ದಿ:22-11-2015 ರಂದು ತನಿಖಾಧಿಕಾರಿಯವರಿಗೆ ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದ್ರಿ ಹೇಳಿಕೆಯನ್ನು ನಿಪಿ-15 ಎಂದು

ಗುರುತಿಸಲಾಯಿತು. ಆರೋಪಿತರು ನನ್ನ ಪರಿಚಯಸ್ಥರಾದ ಕಾರಣ ಅವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.**

**ಮರು ವಿಚಾರಣೆಃ** ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ. ದಂ. ಕುಂದಾಪುರ**